ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರು ಚಂದ್ರಾ ಬಡಾವಣೆ ಉಪ-ವಿಭಾಗ, ಶಕ್ತಿಸೌಧ, 2ನೇ ಮಹಡಿ 4ನೇ ಬಿ ಮುಖ್ಯರಸ್ತೆ, 13ನೇ ಅಡ್ಡರಸ್ತೆ, ಎಂ.ಸಿ. ಬಡಾವಣೆ, ಬೆಂಗಳೂರು- 560040.

ಸಂಖ್ಯೆ :- ವಾ-127/ವಾ.ಸ/ಸಭಾನಡವಳಿ/ /2022-23 ದಿನಾಂಕ : 03-09-2022

**-: ಸಭೆಯ ನಡವಳಿಗಳು :-**

ದಿನಾಂಕ. 03-09-2022 ಶನಿವಾರದಂದು ಪೂರ್ವಾಹ್ನ 11-30 ಘಂಟೆಗೆ ವಾರ್ಡ್ - 127 ಮೂಡಲಪಾಳ್ಯ ವಾರ್ಡ್ ಕಛೇರಿಯಲ್ಲಿ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ನೋಡೆಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆಸಲಾಯಿತು.

ಶ್ರೀ ಎನ್. ಆನಂದ್, ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ - 127 ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರಿದರು. ನಚಿತರ ಸಾರ್ವಜನಿಕರ ಕುಂದುಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂಧಿಸಿದಂತೆ ಹಾಗೂ ಕೋವಿಡ್- 19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡೆಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಹಾಯಕ ಅಭಿಯಂತರರು ಸಭೆಗೆ ಸ್ವಾಗತ ಕೋರುತ್ತಾ, ಸಭೆಯನ್ನು ಮುನ್ನಡೆಸಲಾಯಿತು.

ಸಭೆಗೆ ಹಾಜರಿದ್ದವರು

| | |
|---|---|
| 1 | ಶ್ರೀ ಎನ್. ಆನಂದ್ ಕಾರ್ಯಪಾಲಕ ಅಭಿಯಂತರರು (ವಿದ್ಯುತ್)<br>ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಂಖ್ಯೆ -127 |
| 2 | ಶ್ರೀ ಸತೀಶ್‌ಕುಮಾರ್ .ಬಿ ಸಹಾಯಕ ಅಭಿಯಂತರರು ಕಾರ್ಯದರ್ಶಿ ಮತ್ತು ಸಂಚಾಲಕರು |
| 3 | ಶ್ರೀಮತಿ ರಮ್ಯ ಕೆ.ಎಸ್ ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಶ್ರೀ ಜಯರಾಮಯ್ಯ .ಸಿ ಕೆಲಸ ಪರಿವೀಕ್ಷಕರು |
| 5 | ಶ್ರೀ ಪರಮೇಶ್ವರ್ ಕಂದಾಯ ಪರಿವೀಕ್ಷಕರು |
| 6 | ಶ್ರೀ ನಾಗೇಶ್ .ಕೆ ಕಂದಾಯ ಪರಿವೀಕ್ಷಕರು |
| 7 | ಶ್ರೀ ಕಿರಣ್‌ಕುಮಾರ್ ಕೆಲಸ ಪರಿವೀಕ್ಷಕರು ಬಿಡಬ್ಲ್ಯೂಎಸ್‌ಎಸ್‌ಬಿ |
| 8 | ಶ್ರೀ ದೇವರಾಜ್ ಸೂಪರ್‌ವೈಸರ್ |
| 9 | ಶ್ರೀ ವಿಕಾಸ್ ವಾರ್ಡ್ ಮಾರ್ಷಲ್ |
| 10 | ಶ್ರೀ ಶಂಕರ್ ಸೂಪರ್‌ವೈಸರ್ |
| 11 | ಶ್ರೀಮತಿ ಶಾಂತಮ್ಮ .ವಿ ಲಿಂಕ್ ವರ್ಕ್‌ರ್ |
| 12 | ಶ್ರೀಮತಿ ಶಾಂತಿ ಲಿಂಕ್ ವರ್ಕರ್ |
| 13 | ಶ್ರೀ ಸೋಮಶೇಖರ್ ವಾರ್ಡ್ ಅಧ್ಯಕ್ಷರು |
| 14 | ಶ್ರೀ ರವಿಕುಮಾರ್ .ಎನ್ ಗುತ್ತಿಗೆದಾರರು (ಘನತ್ಯಾಜ್ಯ ನಿರ್ವಹಣೆ) |

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು**

**1) ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ**

ಮಾನ್ಯ ಸಭಾಧ್ಯಕ್ಷರಾದ ನೋಡೆಲ್ ಅಧಿಕಾರಿಯವರು ಕೋವಿಡ್- 19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ಈ ಕೆಳಕಂಡಂತೆ ಸಭೆಯಲ್ಲಿ ತಿಳಿಸಿದರು.

- ಸಭೆಯಲ್ಲಿ ಕೋವಿಡ್- 19 ಸಾಂಕ್ರಮಿಕ ರೋಗದ ಬಗ್ಗೆ ಮುನ್ನೆಚ್ಚರಿಕೆ ಕ್ರಮ ವಹಿಸಲು ಸಭೆಯಲ್ಲಿ ಸೂಚಿಸಿದರು.
- ಕೋವಿಡ್- 19 ಸಂಬಂಧಿಸಿದಂತೆ, 18 ವರ್ಷ ಮೇಲ್ಪಟ್ಟವರಿಗೆ ಕೋವಿಡ್ ವ್ಯಾಸಿನೇಷನ್‌ಗಳನ್ನು ಜ್ಞಾನಸೌಧ ಕಟ್ಟಡದಲ್ಲಿ ಪ್ರತಿದಿನ ನೀಡಲಾಗುತ್ತಿದೆಯೆಂದು ಸಭೆಯಲ್ಲಿ ತಿಳಿಸದರು.

**2) ಅಭಿಯಂತರರ ವಿಭಾಗದ ಬಗ್ಗೆ**

ಮಾನ್ಯ ಸಭಾಧ್ಯಕ್ಷರಾದ ನೋಡೆಲ್ ಅಧಿಕಾರಿಯವರು ವಾರ್ಡ್ - 127 ಅಭಿಯಂತರರ ವಿಭಾಗದ ಬಗ್ಗೆ ಮಾತನಾಡುತ್ತಾ ಈ ಕೆಳಕಂಡಂತೆ ಸಭೆಯಲ್ಲಿ ತಿಳಿಸಿದರು.

- ರಸ್ತೆಗುಂಡಿಗಳನ್ನು ಮುಚ್ಚಲು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ.
- ಭೈರವೇಶ್ವರನಗರ 1ನೇ ಮುಖ್ಯ ರಸ್ತೆ, 1ನೇ ಅಡ್ಡ ರಸ್ತೆಯಲ್ಲಿ ಬಿಡಬ್ಲ್ಯೂಎಸ್‌ಎಸ್‌ಬಿ ಇಂದ ರಸ್ತೆ ಅಗೆಯಲಾಗಿದ್ದು, ಅದನ್ನು ಕಾಂಕ್ರೀಟ್ ಗೊಳಿಸಬೇಕಾಗಿರುತ್ತದೆ.

- ಭೈರವೇಶ್ವರನಗರ 1ನೇ ಮುಖ್ಯ ರಸ್ತೆ, 1ನೇ ಅಡ್ಡ ರಸ್ತೆಯಲ್ಲಿ ಬೋರ್ ವೆಲ್ ಪೈಪನ್ನು ಅಳವಡಿಸಬೇಕಾಗಿರುತ್ತದೆ.
- ಕಲ್ಯಾಣನಗರ 1ನೇ ಮುಖ್ಯ ರಸ್ತೆ, 3ನೇ ಅಡ್ಡ ರಸ್ತೆಯಲ್ಲಿ ಬೋರ್ ವೆಲ್ ಪೈಪನ್ನು ಅಳವಡಿಸಬೇಕಾಗಿರುತ್ತದೆ.
- ಸಹಾಯ 2.0 ಅಪ್ಲಿಕೇಷನ್‌ನಲ್ಲಿ ದಾಖಲಾಗುತ್ತಿರುವ ದೂರುಗಳಿಗೆ ಶೀಘ್ರವಾಗಿ ಸೂಕ್ತ ಕ್ರಮವಹಿಸಬೇಕಾಗಿ ಹಾಗೂ ಆಗಿಂದಾಗ್ಗೆ ದೂರುಗಳನ್ನು ಮುಕ್ತಾಯಗೊಳಿಸಲು ತಿಳಿಸಿದರು.

3) ಉದ್ಯಾನವನ ಹಾಗೂ ಆಟದ ಮೈದಾನಗಳ ಬಗ್ಗೆ :-

- ಎಲ್ಲಾ ಉದ್ಯಾನವನ ಹಾಗೂ ಆಟದ ಮೈದಾನಗಳನ್ನು ಸಮರ್ಪಕವಾಗಿ ನಿರ್ವಹಿಸಲು ಸೂಚಿಸಲಾಯಿತು

4) ಘನತ್ಯಾಜ್ಯ ವಿಭಾಗದ ಬಗ್ಗೆ :-

- ಹಸಿ ಮತ್ತು ಒಣಕಸ ನಿರ್ವಹಣೆಗೆ ಒತ್ತು ನೀಡಲು ಸಭೆಯಲ್ಲಿ ಸೂಚಿಸಲಾಯಿತು ಕಸ ತೆರವುಗೊಳಿಸುವ ಸ್ಥಳದಲ್ಲಿ ಡೆಬ್ರಿಸ್‌ನ್ನು ತೆರವುಗೊಳಿಸಲು ಸೂಚಿಸಲಾಯಿತು.
- ಬೆಸ್ಕಾಂ ಸಿಬ್ಬಂದಿ ಕತ್ತರಿಸುವ ಮರದ ಕೊಂಬೆಗಳನ್ನು ತೆರವಿಗೊಳಿಸಲು ಸೂಚಿಸಲಾಯಿತು.

5) ಬಿಡಬ್ಲ್ಯೂಎಸಎಸ್‌ಬಿ ವಿಭಾಗದ ಬಗ್ಗೆ:-

ವಾರ್ಡ್ ವ್ಯಾಪ್ತಿಯಲ್ಲಿ ಸ್ಯಾನಿಟರಿ ಪೈಪ್‌ಲೈನ್‌ಗಳನ್ನು ದುರಸ್ಥಿಪಡಿಸಲು ಸೂಚಿಸಲಾಯಿತು. ಹಾಗೂ ಮ್ಯಾನ್‌ಹೋಲ್‌ಗಳಲ್ಲಿ ತೆಗೆದಿರುವ ಡೆಬ್ರಿಸ್‌ನ್ನು ಸ್ಥಳಾಂತರಿಸಲು ಸೂಚಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಸಲ್ಲಿಸಿರುವ ದೂರುಗಳನ್ನು ಶೀಘ್ರಗತಿಯಲ್ಲಿ ಬಗೆ ಹರಿಸಲು ತಿಳಿಸಲಾಯಿತು

ಮ್ಯಾನ್ ಹೋಲ್ ಗಳನ್ನು ರಸ್ತೆ ಮಟ್ಟಕ್ಕೆ ಎತ್ತರಗೊಳಿಸಿ ಅದರಿಂದಾಗುವ ಅಪಘಾತಗಳನ್ನು ತಡೆಯಲು ಸೂಚಿಸಲಾಯಿತು.

6) ಬಿಬಿಎಂಪಿ ವಿದ್ಯುತ್ ವಿಭಾಗದ ಬಗ್ಗೆ:-

ಭೈರವೇಶ್ವರನಗರ 1ನೇ ಮುಖ್ಯ ರಸ್ತೆ, 1ನೇ ಅಡ್ಡ ರಸ್ತೆಯಲ್ಲಿ ಬೀದಿ ದೀಪ ಸರಿಪಡಿಸುವಂತೆ ಸೂಚಿಸಲಾಗಿರುತ್ತದೆ.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ಸರಿಪಡಿಸುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಾರ್ಡ್ ಕಮಿಟಿ ವಾರ್ಡ್ – 127 ವಾಟ್ಸ್‌ಅಪ್ ಗ್ರೂಪ್ ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಹಾಯಕ ಅಭಿಯಂತರರು ವಾರ್ಡ್ 127 ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 127

ಅಧ್ಯಕ್ಷರು,
ಹಾಗೂ ಕಾರ್ಯಪಾಲಕ ಅಭಿಯಂತರರು
ನೋಡೆಲ್ ಅಧಿಕಾರಿಗಳು

**ಪ್ರತಿಯನ್ನು:-**

1) ಮಾನ್ಯ ಮಾನ್ಯ ವಲಯ ವಿಶೇಷ ಆಯುಕ್ತರು (ಪಶ್ಚಿಮ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4) ವೃತ್ತ ಆರಕ್ಷಕ ನಿರೀಕ್ಷಕರು (ಕಾನೂನು ಮತ್ತು ಸುವ್ಯವಸ್ಥೆ) ಪೊಲೀಸ್ ಇಲಾಖೆ, ವಿಜಯನಗರ / ಚಂದ್ರಾಲೇಔಟ್ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
5) ವೃತ್ತ ಆರಕ್ಷಕ ನಿರೀಕ್ಷಕರು (ಸಂಚಾರಿ ವಿಭಾಗ) ಪೊಲೀಸ್ ಇಲಾಖೆ, ವಿಜಯನಗರ / ಚಂದ್ರಾಲೇಔಟ್ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
6) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೆಸ್ಕಾಂ, ಕಾಮಾಕ್ಷಿಪಾಳ್ಯ / ವಿಜಯನಗರ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
7) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬಿಡಬ್ಲ್ಯೂಎಸ್‌ಎಸ್‌ಬಿ ವಿಜಯನಗರ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
8) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಕೋಶ ಗೋವಿಂದರಾಜನಗರ ವಿಭಾಗ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪ ನಿರ್ವಹಣೆ (ಬಿಬಿಎಂಪಿ ವಿದ್ಯುತ್) ವಿಭಾಗ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
10) ಸಹಾಯಕ ಕಂದಾಯ ಅಧಿಕಾರಿಗಳು (ಚಂದ್ರಾಬಡಾವಣೆ) ಉಪವಿಭಾಗ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
11) ಅಧೀಕ್ಷಕರು ತೋಟಗಾರಿಕೆ ಇಲಾಖೆ (ಪಶ್ಚಿಮ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
12) ಆರೋಗ್ಯ ವೈಧ್ಯಾಧಿಕಾರಿಗಳು (ಗೋವಿಂದರಾಜನಗರ) ವಿಭಾಗರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
13) ವಲಯ ಅರಣ್ಯಾಧಿಕಾರಿ (ಪಶ್ಚಿಮ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
14) ಕಿರಿಯ / ಹಿರಿಯ ಆರೋಗ್ಯ ಪರಿವೀಕ್ಷಕರು ಸದಸ್ಯರುಗಳ ರವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕೆ
15) ವಾರ್ಡ್ ಪ್ರದೇಶಗಳ ಸ್ಥಳೀಯ ನಾಗರೀಕ ಕಲ್ಯಾಣ ಸಂಘಗಳು ರವರಿಗೆ ಮಾಹಿತಿಗಾಗಿ ಕಳುಹಿಸಿದೆ.